# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

**ಪತ್ರಿಕಾ ಪ್ರಕಟಣೆ** **ದಿನಾಂಕ:23.03.2020**

## ಪೂಜ್ಯ ಮಹಾಪೌರರು ಹಾಗೂ ಮಾನ್ಯ ಆಯುಕ್ತರು ರವರಿಂದ "ವಾರ್ ರೂಂ" ಉದ್ಘಾಟನೆ:



ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೊರೋನಾ ವೈರಸ್ ಸೋಂಕು ಹರಡದಂತೆ ಕೈಗೊಂಡಿರುವ ಮುನ್ನೆಚ್ಚರಿಕಾ ಕ್ರಮಗಳ ಬಗ್ಗೆ ನಿಗಾ ವಹಿಸಲು ಹಾಗೂ ಸಾರ್ವಜನಿಕರಿಗೆ ಅಗತ್ಯ ಮಾಹಿತಿಗಳನ್ನು ನೀಡಲು, ಸಹಾಯ 2.0 ಡ್ಯಾಶ್ ಬೋರ್ಡ್, ಸಾಂಕ್ರಾಮಿಕ ರೋಗಗಳ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ಹಾಗೂ ನಿಗಾ ವಹಿಸಲು BBMP-PHIEC ಅಪ್ಲಿಕೇಶನ್‌ನ ಮಾಹಿತಿ ಘನತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದಂತೆ ಪಾಲಿಕೆ ಕೇಂದ್ರ ಕಛೇರಿಯ ಅನೆಕ್ಸ್ ಕಟ್ಟಡ 6ನೇ ಮಹಡಿಯಲ್ಲಿ ಸ್ಥಾಪಿಸಿರುವ **"24x7 ಕಮಾಂಡ್ ಅಂಡ್ ಕಂಟ್ರೋಲ್ ವಾರ್ ರೂಂ**"ಗೆ ಪೂಜ್ಯ ಮಹಾಪೌರರು ರವರು ಚಾಲನೆ ನೀಡಿದರು. ಇದೇ ವೇಳೆ "ಬೆಂಗಳೂರು ನಗರದ ರಸ್ತೆಗಳ ನಿರ್ಮಾಣ ಮತ್ತು ನಿರ್ವಹಣೆ ಮಾರ್ಗಸೂಚಿ" ಪುಸ್ತಕ ಹಾಗೂ "ಅತ್ಯಾಧುನಿಕ ವೈರ್‌ಲೆಸ್ ಡಿಜಿಟಲ್ ವಾಕಿಟಾಕಿ" ಬಿಡುಗಡೆಗೊಳಿಸಲಾಯಿತು. ಈ ವೇಳೆ ಮಾನ್ಯ ಶಾಸಕರು ಶ್ರೀ ರಿಜ್ವಾನ್ ಹರ್ಷದ್, ಸಾರ್ವಜನಿಕ ಆರೋಗ್ಯ ಸ್ಥಾಯಿ ಸಮಿತಿ ಅಧ್ಯಕ್ಷರು ಶ್ರೀ ಮಂಜುನಾಥ ರಾಜು.ಜಿ, ವಿರೋಧ ಪಕ್ಷದ ನಾಯಕರು ಶ್ರೀ ಅಬ್ದುಲ್ ವಾಜೀದ್, ಜೆಡಿಎಸ್ ಪಕ್ಷದ ನಾಯಕರು ಶ್ರೀಮತಿ ನೇತ್ರಾ ನಾರಾಯಣ್, ಆಯುಕ್ತರು ಶ್ರೀ ಬಿ.ಹೆಚ್.ಅನಿಲ್ ಕುಮಾರ್, ವಿಶೇಷ ಆಯುಕ್ತರು(ಆರೋಗ್ಯ) ಡಾ. ರವಿಕುಮಾರ್ ಸುರಪುರ, ವಿಶೇಷ ಆಯುಕ್ತರು(ಘನತ್ಯಾಜ್ಯ) ಶ್ರೀ ಡಿ.ರಂದೀಪ್, ಬೆಂಗಳೂರು ಸ್ಮಾರ್ಟ್ ಸಿಟಿ ಲಿ. ವ್ಯವಸ್ಥಾಪಕ ನಿರ್ದೇಶಕರು ಶ್ರೀಮತಿ ಹೆಪ್ಸಿಬಾ ರಾಣಿ ಕೊರ್ಲಪಾಟಿ, ರಸ್ತೆ ಮೂಲಭೂತ ಸೌಕರ್ಯ ವಿಭಾಗದ ಮುಖ್ಯ ಅಭಿಯಂತರರು ಶ್ರೀ ಸೋಮಶೇಕರ್ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಬಿಬಿಎಂಪಿ ಸ್ಥಾಪಿಸಿರುವ "ವಾರ್ ರೂಂ"ನಲ್ಲಿ ಕೊರೋನಾ ವೈರಸ್ ಸೋಂಕು ಹರಡದಂತೆ ಮುಂಜಾಗ್ರತಾ ವಹಿಸಲು, ಹೋಮ್ ಕ್ವಾರಂಟೈನ್ ಸೀಲ್(ಗೃಹ ನಿರ್ಬಂಧ ಮುದ್ರೆ) ಹಾಕಿದವರ ಮೇಲೆ ನಿಗಾ ವಹಿಸಲು ಸೇರಿದಂತೆ ಇನ್ನಿತರೆ ಮಾಹಿತಿಗಾಗಿ ವಲಯವಾರು ನಕ್ಷೆ ಸಿದ್ದಪಡಿಸಿ ಟ್ರ್ಯಾಕಿಂಗ್ ಸೌಲಭ್ಯವನ್ನು ಕಲ್ಪಿಸಲಾಗಿದೆ ಎಂದು ಮಹಾಪೌರರು ತಿಳಿಸಿದರು.

ವಾರ್ ರೂಂ ಉದ್ಘಾಟಿಸಿದ ಬಳಿಕ ಮಾತನಾಡಿದ ಮಹಾಪೌರರು, ವಾರ್ ರೂಂ ಅನ್ನು 24 ಗಂಟೆಯಲ್ಲಿ ಸ್ಥಾಪಿಸಲಾಗಿದ್ದು, ವಿದೇಶದಿಂದ ಆಗಮಿಸಿದ ಎಲ್ಲಾ ಪ್ರಯಾಣಿಕರ ಮಾಹಿತಿಯನ್ನು ಕಲೆ ಹಾಕಿ, ಅವರು 14 ದಿನಗಳ ಕಾಲ ಮನೆಯಿಂದ ಹೊರಗೆ ಬರದಂತೆ ಕ್ರಮ ವಹಿಸಲು ಹಾಗೂ ಅವರ ಮೇಲೆ ನಿಗಾ ಇರಿಸುವ ಕೆಲಸವನ್ನು ಮಾಡಲಾಗುತ್ತದೆ. ವಾರ್ ರೂಂನಲ್ಲಿ ನಿಯೋಜನೆ ಮಾಡಿರುವ ಸಿಬ್ಬಂದಿಯು ಪ್ರತಿ ನಿತ್ಯ ಅವರಿಗೆ ಕರೆ ಮಾಡಿ ಆರೋಗ್ಯ ಸ್ಥಿತಿಯ ಬಗ್ಗೆ ಮಾಹಿತಿ ಕಲೆ ಹಾಕುತ್ತಾರೆ ಎಂದು ತಿಳಿಸಿದರು.

ಆಸ್ಪತ್ರೆಗಳಲ್ಲಿ ಎಷ್ಟು ಆಸನಗಳಿವೆ, ಸೋಂಕು ಹೆಚ್ಚಾದರೆ ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕಾ ಕ್ರಮಗಳು. ನಗರದಲ್ಲಿ ಕೈಗೊಂಡಿರುವ ಮುನ್ನೆಚ್ಚರಿಕಾ ಕ್ರಮಗಳು, ಸೋಂಕು ದೃಢಪಟ್ಟ ಪ್ರದೇಶ ನಕ್ಷೆ ಸಿದ್ಧಪಡಿಸುವುದು, ಪಾಲಿಕೆ ಕೈಗೊಂಡ ಕ್ರಮಗಳು ವಲಯ ಮಟ್ಟದಲ್ಲಿ ಜಾರಿಯಾಗಿವೆಯೇ ಎಂಬುದನ್ನು ವಾರ್ ರೂಂನಲ್ಲಿ ದಿನದ 24x7 ಮೂರು ಪಾಳಿಯಲ್ಲಿ ಸಿಬ್ಬಂದಿ ಕಾರ್ಯನಿರ್ವಹಿಸಲಿದ್ದಾರೆ. ದತ್ತಾಂಶ ಸಂಗ್ರಹಣೆ, ಸೋಂಕು ದೃಢಪಟ್ಟ ಪ್ರದೇಶದಲ್ಲಿ ಎಷ್ಟು ಕುಟುಂಬಗಳಿವೆ, ಎಷ್ಟು ಮಂದಿ ವಾಸವಾಗಿದ್ದಾರೆ ಎಂಬ ಮಾಹಿತಿ ಪಟ್ಟಿ ಸಿದ್ಧಪಡಿಸುವುದು ಸೇರಿದಂತೆ ಇತರೆ ಕಾರ್ಯ ನಡೆಯಲಿದೆ ಎಂದು ತಿಳಿಸಿದರು.

ಕೊರೋನಾ ವೈರಸ್ ಎದುರಿಸಲು ಪಾಲಿಕೆ ಎಲ್ಲಾ ಸಿದ್ದತೆಗಳನ್ನು ಮಾಡಿಕೊಂಡಿದೆ. ವಿದೇಶದಿಂದ ನಗರಕ್ಕೆ ಬಂದಿರುವ ವ್ಯಕ್ತಿಗಳ ಮಾಹಿತಿ ಸಂಗ್ರಹಿಸಿ, ಅವರ ಮನೆಗೆ ತೆರಳಿ ಹೋಮ್ ಕ್ವಾರಂಟೈನ್ ಸೀಲ್ ಹಾಕಲಾಗುತ್ತಿದೆ. ಅದರಂತೆ ಪಾಲಿಕೆ ವ್ಯಾಪ್ತಿಯಲ್ಲಿ ಸುಮಾರು 20 ಸಾವಿರ ಮಂದಿಗೆ, ಹೋಮ್ ಕ್ವಾರಂಟೈನ್ ಸೀಲ್ ಹಾಕಲಾಗುತ್ತಿದ್ದು, ಅದಕ್ಕಾಗಿ ಪಾಲಿಕೆ ಹಾಗೂ ಪೊಲೀಸ್ ಸಿಬ್ಬಂದಿಯ 300 ತಂಡಗಳನ್ನು ನಿಯೋಜನೆ ಮಾಡಿ, ಈಗಾಗಲೇ 6 ಸಾವಿರ ಮಂದಿಗೆ ಮುದ್ರೆ ಹಾಕಲಾಗಿದೆ. ಇಂದು 6 ಸಾವಿರ ಮಂದಿಗೆ ಮುದ್ರೆ ಹಾಕಲಿದ್ದು, ನಾಳೆ ಹೆಚ್ಚುವರಿಯಾಗಿ 200 ತಂಡಗಳನ್ನು ನಿಯೋಜನೆ ಮಾಡಿ ಎಲ್ಲಾರಿಗೂ ಮುದ್ರೆ ಹಾಕಿ, ಮುಂಜಾಗ್ರತೆ ವಹಿಸಲು ಸೂಚನೆ ನೀಡಲಾಗುತ್ತಿದೆ ಎಂದು ಹೇಳಿದರು.

ನಕ್ಷೆಯನ್ನು ವಲಯವಾರು ನಿರ್ಮಿಸಿದ್ದು, ಕೊರೋನಾ ವೈರೆಸ್ ಸೋಂಕಿತರು/ ಶಂಕಿತರು, ಆಸ್ಪತ್ರೆಗಳನ್ನು ಬಣ್ಣಗಳ ಆಧಾರದ ಮೇಲೆ ಗುರುತಿಸಲಾಗಿದೆ. ಕೊರೋನಾ ಸೋಂಕಿತರನ್ನು ಕೆಂಪು ಬಣ್ಣ, ಕೊರೋನಾ ಶಂಕಿತರಿರುವ ಪ್ರದೇಶವನ್ನು ಹಳದಿ ಬಣ್ಣ, ಆಸ್ಪತ್ರೆಗಳಿರುವ ಸ್ಥಳವನ್ನು ನೀಲಿ ಬಣ್ಣದಲ್ಲಿ ಗುರುತಿಸಲಾಗಿದೆ. ಸೋಂಕು ಪತ್ತೆ ಆದರೆ ಹತ್ತಿರ ಯಾವ ಆಸ್ಪತ್ರೆಗಳಿವೆ, ಎಷ್ಟು ಆಸನಗಳಿವೆ ಎಂಬುದರ ಬಗ್ಗೆ ಮಾಹಿತಿ ಪಡೆಯಬಹುದಾಗಿದೆ.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**